ಆ) ಹಾಗಿದ್ದಲ್ಲಿ, ಅಲ್ಲಿ ಹಣ್ಣಿನ ಗಿಡಗಳನ್ನು ಹಾಗೂ ಔಷದ ಗಿಡಗಳನ್ನು ಬೆಳೆಸಲು ಸರ್ಕಾರದವರು ಕ್ರಮ ಕೈಗೊಳ್ಳುವರೇ;

ಇ) ಅತೀಕ್ರಮಣ ತಪ್ಪಿಸುವ ಸಲುವಾಗಿ ಶ್ರೀಕ್ಷೇತ್ರ ಸೊಗಲದಲ್ಲಿ ಅರಣ್ಯ ಭೂಮಿ ಕಾಪಾಡಲು ತಂತಿಯ ಬೇಲಿಯನ್ನು ಹಾಕಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಶ್ರೀ ಎಂ.ಎಸ್. ಆತ್ಮಾನಂದ (ತೋಟಗಾರಿಕೆ ರಾಜ್ಯ ಸಚಿವರು) :

ಅ) ಬಂದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಈ ಕ್ಷೇತ್ರದ ಸದರಿ ಭೂಮಿಯು ತೋಟಗಾರಿಕೆ ಇಲಾಖೆಯ ಅಧೀನದಲ್ಲಿ ಇಲ್ಲದಿರುವುದರಿಂದ ಈ ಇಲಾಖೆಯ ವತಿಯಿಂದ ಬೇಲಿ ಹಾಕುವ ಪ್ರಶ್ನೆ ಉದ್ಭವಿಸುವುದಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ. ವೀರಪ್ಪ ಮೊಯಿಲಿ : (ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಉಪಾಧ್ಯಕ್ಷೆಯವರೆ, ತಾ : 12-3-92ರಂದು ಲಿಖಿತಮೂಲಕ ಉತ್ತರಿಸುವ 13ನೇ ಪಟ್ಟಿಯಲ್ಲಿರುವ 27 ಪ್ರಶ್ನೆಗಳ ಪೈಕಿ ಪ್ರಶ್ನೆಗಳ ಸಂಖ್ಯೆ : 1322, 1673, 1323, 1367, 1424, 1427, 1588, 92, 91, 1716, 1585 ಈ ಪ್ರಶ್ನೆಗಳನ್ನು ಹೊರತುಪಡಿಸಿ ಇನ್ನುಳಿದ 16 ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಸೇಡಂ ತಾಲ್ಲೂಕಿನಲ್ಲಿ ಅರಣ್ಯ ಇಲಾಖೆಯವರು ವಿವಿಧ ಬಾಬುಗಳಲ್ಲಿ ಖರ್ಚು ಮಾಡಿದ ಹಣ

985 (1235) ಶ್ರೀ ಬಸವಂತರೆಡ್ಡಿ ಮೋತಕಪಲ್ಲಿ (ಸೇಡಂ) : ಮಾನ್ಯ ಅರಣ್ಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗ ಜಿಲ್ಲೆಯ ಸೇಡಂ ತಾಲ್ಲೂಕಿನಲ್ಲಿ 1990-91 ಹಾಗೂ 1991-92ನೇ ಸಾಲಿನಿಂದ ಇಲ್ಲಿಯವರೆಗೆ ಅರಣ್ಯ ಇಲಾಖೆಯವರು ವಿವಿಧ ಬಾಬುಗಳಲ್ಲಿ ಖರ್ಚು ಮಾಡಿರುವ ಹಣವೆಷ್ಟು;

ಆ) 1990-91ನೇ ಸಾಲಿನಲ್ಲಿ ಈ ಅರಣ್ಯದಿಂದ ಬಂದಿರುವ ಆದಾಯವೆಷ್ಟು?

ಇ) 1990-91ನೇ ಹಾಗೂ 1991-92ನೇ ಸಾಲಿನಲ್ಲಿ ಅರಣ್ಯ ಇಲಾಖೆಯವರು ಮಾಡಿರುವ ಒಟ್ಟು ನರ್ಸರಿಗಳೆಷ್ಟು;

ಈ) 1990-91ನೇ ಸಾಲಿನಲ್ಲಿ ಯಾವ ಅರಣ್ಯಗಳಲ್ಲಿ ಯಾವ ಯಾವ ಸರ್ವೆ ನಂಬರುಗಳಲ್ಲಿ ಸಸಿಗಳನ್ನು ನೆಡಲಾಗಿದೆ;

ಉ) ಈಗ ಅವು ಯಾವ ಹಂತದಲ್ಲಿ ಬೆಳೆದಿದೇ?

ಊ) ವಿವಿಧ ನರ್ಸರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಹಾಗೂ ಪುರುಷ ಕೂಲಿಕಾರರ ಸಂಖ್ಯೆ ಎಷ್ಟು: ಅವರ ಹೆಸರುಗಳೇನು ಹಾಗೂ ಅವರಿಗೆ ಕೊಡುವ ದಿನಗೂಲಿ ಎಷ್ಟು?